# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : (2269+2228) 228 |
| ಮಾನ್ಯ ಸದಸ್ಯರ ಹೆಸರು | : ಶ್ರೀ ರಾಮೋಜಿಗೌಡ (ಪದವೀಧರರ ಕ್ಷೇತ್ರ) & ಶ್ರೀ ಪ್ರತಾಪ್ ಸಿಂಹ ನಾಯಕ್ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : 26.03.2026 |
| ಉತ್ತರಿಸುವವರು | : ಮಾನ್ಯ ಮುಖ್ಯಮಂತ್ರಿಗಳು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಎನ್.ಪಿ.ಎಸ್ ಯೋಜನೆಯಡಿ ನಿವೃತ್ತಿಯಾದ ಸರ್ಕಾರಿ ನೌಕರರಿಗೆ ಕನಿಷ್ಠ ಪಿಂಚಣಿಯೂ ಸಿಗದೆ ನಿವೃತ್ತ ನೌಕರರ ಕುಟುಂಬದವರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಎನ್.ಪಿ.ಎಸ್. ಯೋಜನೆಯಡಿ ನಿವೃತ್ತಿ ಹೊಂದಿದ ನೌಕರರ ಪ್ರಾನ್ ಖಾತೆಯಲ್ಲಿರುವ 60% Lumpsum ಮೊತ್ತವನ್ನು ನೌಕರರು ಹಿಂಪಡೆಯಬಹುದಾಗಿದೆ.<br><br>ಉಳಿದ 40% ಮೊತ್ತವನ್ನು Annuity Service Provider ನಲ್ಲಿ ಹೂಡಿಕೆ ಮಾಡಿ, ಮಾಸಿಕ ಪಿಂಚಣಿಯನ್ನು ಪಡೆಯಲು ಅವಕಾಶ ಕಲ್ಪಿಸಲಾಗಿರುತ್ತದೆ.<br><br>ಎನ್.ಪಿ.ಎಸ್ ಯೋಜನೆಯಡಿ ನಿವೃತ್ತರಾಗುವ ಸರ್ಕಾರಿ ನೌಕರರ ಪಿಂಚಣಿಯು ನೌಕರರು ಸಲ್ಲಿಸುವ ಸೇವಾ ಅವಧಿ ಮತ್ತು ಸದರಿ ಅವಧಿಯಲ್ಲಿ ನೌಕರರ ಮೂಲವೇತನದ ಆಧಾರದ ಮೇಲೆ ಪಾವತಿಸಲ್ಪಡುವ ವಂತಿಗೆಯ ಮೇರೆಗೆ ನಿರ್ಧರಿಸಲ್ಪಡುತ್ತದೆ. |
| ಆ) | ರಾಜ್ಯದಲ್ಲಿ ಎನ್‌ಪಿಎಸ್ ರದ್ದುಗೊಳಿಸಿ ಹಳೆಯ ಪಿಂಚಣಿ ಯೋಜನೆಯನ್ನು ಕೂಡಲೇ ಜಾರಿಗೊಳಿಸಬೇಕೆಂಬ ಬೇಡಿಕೆ ನಿರಂತರವಾಗಿ ಕೇಳಿ ಬರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ರಾಜ್ಯದಲ್ಲಿ ಜಾರಿಯಲ್ಲಿರುವ ರಾಷ್ಟ್ರೀಯ ಪಿಂಚಣಿ ಯೋಜನೆಗೆ ಸೂಕ್ತ ಬದಲಾವಣೆ / ಮಾರ್ಪಾಡು ಮಾಡಲು ಸಮಗ್ರವಾಗಿ ಪರಿಶೀಲಿಸಲು ಈಗಾಗಲೇ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ದಿನಾಂಕ: 11.12.2018ರ ಮತ್ತು ದಿನಾಂಕ: 01.03.2023 ರ ಸರ್ಕಾರಿ ಆದೇಶಗಳನ್ವಯ ರಚಿಸಲಾಗಿರುವ ಸಮಿತಿಯನ್ನು ದಿನಾಂಕ: 16.08.2024ರಲ್ಲಿ ಪುನರ್ ರಚಿಸಿ ಆದೇಶಿಸಲಾಗಿದ್ದು, ಸಮಿತಿಯು ಹಲವು ಬಾರಿ ಸಭೆಗಳನ್ನು ನಡೆಸಿರುತ್ತದೆ.<br><br>ರಾಷ್ಟ್ರೀಯ ಪಿಂಚಣಿ ಯೋಜನೆಗೆ ಬದಲಾವಣೆ/ಮಾರ್ಪಾಡು ಮಾಡಿರುವ ರಾಜ್ಯಗಳಾದ ಆಂಧ್ರ ಪ್ರದೇಶ ಮತ್ತು ಹಿಮಾಚಲ ಪ್ರದೇಶ ರಾಜ್ಯಗಳಿಗೆ ಅಧಿಕಾರಿಗಳನ್ನೊಳಗೊಂಡ ತಂಡಗಳು ಅಧ್ಯಯನ ನಡೆಸಿ ವರದಿಗಳನ್ನು ಸಮಿತಿಗೆ ಸಲ್ಲಿಸಲಾಗಿದೆ.<br><br>ರಾಜ್ಯದಲ್ಲಿ ಪ್ರಸ್ತುತ ಜಾರಿಯಲ್ಲಿರುವ NPS ಯೋಜನೆಗೆ ಸೂಕ್ತ ಮಾರ್ಪಾಡುಗಳನ್ನು ಮಾಡುವ ಸಾಧ್ಯತೆಗಳ ಕುರಿತು ಮತ್ತು NPS ಯೋಜನೆಯ ಬದಲಾಗಿ ರಾಜ್ಯದಲ್ಲಿ ಏಕೀಕೃತ ಪಿಂಚಣಿ ಯೋಜನೆ (Unified Pension Scheme, UPS) ಅನ್ನು ಜಾರಿ ಮಾಡುವ ಸಾಧ್ಯತೆಗಳು ಮತ್ತು ಇತರೆ ವಿಷಯಗಳ ಕುರಿತು ಸಲಹೆಗಳನ್ನು ನೀಡುವ ಬಗ್ಗೆ, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ ಮತ್ತು ಕರ್ನಾಟಕ ರಾಜ್ಯ ಸರ್ಕಾರಿ NPS ನೌಕರರ ಸಂಘ ಇವರುಗಳೊಂದಿಗೆ ಸಮಿತಿಯ ಸಭೆಯಲ್ಲಿ ಚರ್ಚಿಸಲಾಗಿದೆ. ಸಮಿತಿಯ ವರದಿಯನ್ನು ನಿರೀಕ್ಷಿಸಲಾಗಿದೆ. |
| ಇ) | 2006ಕ್ಕಿಂತ ಮೊದಲು ದಿನಾಂಕ:01.04.2006ರ ನಂತರ ನೇಮಕಾತಿ ಅಧಿಸೂಚನೆ ಹೊರಡಿಸಿ ನೇಮಕಾತಿ ಹೊಂದಿದ ನೌಕರರೂ ಎನ್.ಪಿ.ಎಸ್ ಯೋಜನೆಗೆ ಒಳಪಟ್ಟಿದ್ದು, ಇನ್ನೂ ಎನ್.ಪಿ.ಎಸ್ ನೌಕರರಿಗೆ ಹಳೆ ಪಿಂಚಣಿ ಜಾರಿ ಮಡದಿರಲು ಕಾರಣಗಳೇನು; | |
| ಈ) | ಆರ್ಥಿಕ ಸಂಪನ್ಮೂಲ ಮತ್ತು ಆದಾಯಗಳ ಕ್ರೋಢೀಕರಣದ ದೃಷ್ಟಿಯಿಂದ ಕರ್ನಾಟಕ ರಾಜ್ಯಕ್ಕಿಂತ ಬಹಳ ಹಿಂದಿರುವ ದೇಶದ ಬಹುತೇಕ ಇತರೆ ರಾಜ್ಯಗಳು ಈಗಾಗಲೇ ತನ್ನ ಸರ್ಕಾರಿ ನೌಕರರಿಗೆ ಈ ಹಿಂದೆ ಇದ್ದ ಹಳೆಯ ಪಿಂಚಣಿ ಯೋಜನೆಯನ್ನು ಮರು ಜಾರಿಗೊಳಿಸಿದ್ದು, ರಾಜ್ಯ ಸರ್ಕಾರ ಮಾತ್ರ ಇದುವರೆವಿಗೂ ಜಾರಿಗೊಳಿಸದೇ ಇರಲು ಯಾವುದಾದರೂ ಸಕಾರಣಗಳಿವೆಯೇ; (ವಿವರ ನೀಡುವುದು) | ರಾಜಸ್ಥಾನ, ಹಿಮಾಚಲ ಪ್ರದೇಶ ಒಳಗೊಂಡಂತೆ ಹಲವು ರಾಜ್ಯಗಳು OPS ಯೋಜನೆಯನ್ನು ಮರುಜಾರಿ ಮಾಡಲಾಗಿದ್ದರೂ ಸಹ, PFRDA ರವರು ಒ.ಪಿ.ಎಸ್. ಮರು ಜಾರಿ ಮಾಡಿರುವ ಸದರಿ ರಾಜ್ಯಗಳು ಈಗಾಗಲೇ ಪಾವತಿಸಿರುವ NPS ವಂತಿಗೆ ಮೊತ್ತಗಳನ್ನು ಸಂಬಂಧಿಸಿದ ರಾಜ್ಯ ಸರ್ಕಾರಗಳಿಗೆ ಹಿಂದಿರುಗಿಸಿರುವುದಿಲ್ಲ. |

| | | |
|---|---|---|
| | | ಕೇಂದ್ರ ಸರ್ಕಾರವು ಮಾಸಿಕ ಪಿಂಚಣಿ ಆಧಾರಿತ UPS ಯೋಜನೆಯನ್ನು ಅಳವಡಿಸಿಕೊಳ್ಳಲು ಎಲ್ಲಾ ರಾಜ್ಯ ಸರ್ಕಾರಗಳಿಗೆ ಅವಕಾಶ ಕಲ್ಪಿಸಿದ್ದರೂ ಸಹ, ಕೆಲವೇ ರಾಜ್ಯಗಳನ್ನು ಹೊರತುಪಡಿಸಿ ಬಹುತೇಕ ರಾಜ್ಯಗಳು NPS ಯೋಜನೆಯನ್ನೇ ಮುಂದುವರಿಸಿರುತ್ತಾರೆ.<br><br>ಆಂಧ್ರ ಪ್ರದೇಶವು OPS ಯೋಜನೆಯನ್ನು ಅಳವಡಿಸಿಕೊಳ್ಳದೇ, ಕನಿಷ್ಠ ಪಿಂಚಣಿ ಮೊತ್ತವನ್ನು ಖಾತ್ರಿಪಡಿಸುವ Guaranteed Pension Scheme ಯೋಜನೆಯನ್ನು ಜಾರಿಗೊಳಿಸಿರುತ್ತಾರೆ.<br><br>ಇತ್ತೀಚೆಗೆ ತಮಿಳುನಾಡು ಸರ್ಕಾರವು ಸಹ OPS ಯೋಜನೆಯನ್ನು ಅಳವಡಿಸಿಕೊಳ್ಳದೇ, Tamil Nadu Assured Pension Scheme (TAPS) ಯೋಜನೆಯನ್ನು ಜಾರಿಗೊಳಿಸಿರುತ್ತಾರೆ. |
| ಇ) | ಹಳೆ ಪಿಂಚಣಿ ಜಾರಿ ಮಾಡಲು ಸರ್ಕಾರ ರಚಿಸಿರುವ ಸಮಿತಿಯು ಇದುವರೆಗೂ ಅಧ್ಯಯನ ವರದಿ ಸಲ್ಲಿಸದಿರಲು ಕಾರಣಗಳೇನು; (ವಿವರ ನೀಡುವುದು) | ಕೇಂದ್ರ ಸರ್ಕಾರವು ಮಾರ್ಪಡಿಸಿದ ಪಿಂಚಣಿ ಯೋಜನೆಯಾದ Unified Pension Scheme (UPS) ಅನ್ನು ಜಾರಿಗೊಳಿಸಿರುತ್ತಾರೆ. UPS ಅನ್ನು ಜಾರಿಗೊಳಿಸಿದ ನಂತರವೂ ಸಹ NPS ಯೋಜನೆಗೆ ಹಲವು ಮಾರ್ಪಾಡುಗಳನ್ನು ಮಾಡಲಾಗಿರುತ್ತದೆ. ಆದಾಗ್ಯೂ, NPS ಯೋಜನೆಯ ವ್ಯಾಪ್ತಿಗೊಳಪಟ್ಟಿರುವ ಅಧಿಕಾರಿಗಳು/ನೌಕರರುಗಳು NPS ಯೋಜನೆಯಲ್ಲಿಯೇ ಮುಂದುವರೆಯಲು ಅಥವಾ UPS ಯೋಜನೆಗೆ ಬದಲಾಯಿಸಿಕೊಳ್ಳಲು ಆಯ್ಕೆ ನೀಡಲಾಗಿದೆ.<br><br>ಕೇಂದ್ರ ಸರ್ಕಾರವು ಮಾಸಿಕ ಪಿಂಚಣಿ ಆಧಾರಿತ UPS ಯೋಜನೆಯನ್ನು ಅಳವಡಿಸಿಕೊಳ್ಳಲು ಎಲ್ಲಾ ರಾಜ್ಯ ಸರ್ಕಾರಗಳಿಗೆ ಅವಕಾಶ ಕಲ್ಪಿಸಿದ್ದರೂ ಸಹ, ಕೆಲವೇ ರಾಜ್ಯಗಳನ್ನು ಹೊರತುಪಡಿಸಿ ಬಹುತೇಕ ರಾಜ್ಯಗಳು NPS ಯೋಜನೆಯನ್ನೇ ಮುಂದುವರಿಸಿರುತ್ತಾರೆ. ಅಲ್ಲದೇ, ಕೇಂದ್ರ ಸರ್ಕಾರದ ಹೆಚ್ಚಿನ ಅಧಿಕಾರಿಗಳು/ನೌಕರರುಗಳು UPS ಯೋಜನೆಯನ್ನು ಆಯ್ಕೆ ಮಾಡಿಕೊಳ್ಳದೆ NPS ಯೋಜನೆಯಲ್ಲಿಯೇ ಮುಂದುವರೆದಿರುತ್ತಾರೆ.<br><br>ಆದ್ದರಿಂದ, ಪಿಂಚಣಿ ಸಂಬಂಧಿತ ನಿಯಮಗಳಲ್ಲಿ ಹಲವು ಬದಲಾವಣೆಗಳು ಆಗುತ್ತಿವೆ. ಪಿಂಚಣಿ ನಿಯಮಗಳಲ್ಲಿ ಆಗುತ್ತಿರುವ ಈ ಹೊಸ ಬದಲಾವಣೆಗಳ ಪರಿಣಾಮಗಳನ್ನು ಅರ್ಥೈಸಿಕೊಳ್ಳಲು ಹಾಗೂ ಈ ಕುರಿತು ಸಮಗ್ರ ಪರಿಹಾರವನ್ನು ನೀಡಬೇಕಾಗಿರುವುದರಿಂದ, ಸಮಿತಿಯು ಸರ್ಕಾರಕ್ಕೆ ಅಂತಿಮ ವರದಿಯನ್ನು ಸಲ್ಲಿಸಲು ಹೆಚ್ಚಿನ ಸಮಯಾವಕಾಶದ ಅವಶ್ಯಕತೆ ಇರುತ್ತದೆ. |
| ಈ) | ಶೀಘ್ರವಾಗಿ ಹಳೆ ಪಿಂಚಣಿ ಯೋಜನೆ ಜಾರಿ ಮಾಡಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ, ಮತ್ತು ಇನ್ನೂ ಎಷ್ಟು ಕಾಲಮಿತಿ ತೆಗೆದುಕೊಳ್ಳಲಿದೆ: | |
| ಉ) | ಸರ್ಕಾರಿ ನೌಕರರ ಕರ್ತವ್ಯದ ವೇಳೆಯಲ್ಲಿ ಸಾರ್ವಜನಿಕರಿಂದ ನಡೆಯುವ ಹಲ್ಲೆ, ದೌರ್ಜನ್ಯ, ಅವಾಚ್ಯ ಶಬ್ದಗಳಿಂದ ನಿಂದನೆ ಮತ್ತು ಕಿರುಕುಳ ನೀಡುವ ವ್ಯಕ್ತಿಗಳ ವಿರುದ್ಧ ಕಾನೂನು ಕ್ರಮ ಜರುಗಿಸಲು ಸರ್ಕಾರ ಅತ್ಯಂತ ಸಂಯೋಜಿತ ಮತ್ತು ಪರಿಣಾಮಕಾರಿ ಮಾದರಿಯ ವ್ಯವಸ್ಥೆಯನ್ನು ಜಾರಿಗೆ ತರಲು ಈ ಕೂಡಲೇ ಅಗತ್ಯ ಹಾಗೂ ಸೂಕ್ತ ಕ್ರಮವಹಿಸುವುದೇ? | ಸರ್ಕಾರಿ ನೌಕರರ ಕರ್ತವ್ಯದ ವೇಳೆಯಲ್ಲಿ ಸಾರ್ವಜನಿಕರಿಂದ ನಡೆಯುವ ಹಲ್ಲೆ, ದೌರ್ಜನ್ಯ, ಅವಾಚ್ಯ ಶಬ್ದಗಳಿಂದ ನಿಂದನೆ ಮತ್ತು ಕಿರುಕುಳ ಹಾಗೂ ಸರ್ಕಾರಿ ಆಸ್ತಿಗೆ ಹಾನಿ ಮಾಡುವುದನ್ನು ನಿಷೇಧಿಸುವ ಕುರಿತು ಕಾಯ್ದೆ ರೂಪಿಸುವ ಪ್ರಸ್ತಾವನೆಯು ಸರ್ಕಾರದ ಪರಿಶೀಲನೆಯಲ್ಲಿರುತ್ತದೆ. |

ಸಂಖ್ಯೆ:ಆಇ-ಪಿಇಎನ್/69/2026

(ಸಿದ್ದರಾಮಯ್ಯ)
ಮುಖ್ಯಮಂತ್ರಿ